**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -2722/2024**
**ಚಾಸಾ - 02 / ಪ್ರಾಸಾ - 02**

| | |
|---|---|
| ಹೆಸರು | **ಪ್ರಿಯಾನ್ ಶು ಮಿಶ್ರಾ** |
| ತಂದೆಯ ಹೆಸರು | **ರಾಜೇಶ್ ಕುಮಾರ್** |
| ವಯಸ್ಸು | **23** |
| ಉದ್ಯೋಗ | **ವಿದ್ಯಾರ್ಥಿ** |
| ವಿಳಾಸ | **ಬೆಂಗಳೂರು** |

**ದಿನಾಂಕಃ06-06-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಸಾಕ್ಷಿಗೆ ಕನ್ನಡ ಬಾಷೆಯು ಬರುವುದಿಲ್ಲ ಮತ್ತು ತನಗೆ ಆಂಗ್ಲ ಬಾಷೆ ಬರುತ್ತದೆ ಎಂದು ಹೇಳಿದ ಕಾರಣ ನ್ಯಾಯಾಲಯಕ್ಕೆ ಆಂಗ್ಲ ಬಾಷೆಯು ಗೊತ್ತಿರುವ ಕಾರಣದಿಂದ ಸಾಕ್ಷಿ ವಿಚಾರಣೆಯನ್ನು ಮಾನ್ಯ ಎಪಿಪಿ ಮತ್ತು ಆರೋಪಿಯ ಪರ ವಕೀಲರು ಸಮ್ಮತಿಯಿಂದ ಮಾಡಲಾಗಿರುತ್ತದೆ.**

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಮೃತ ರೇಖಾಪರಿಹಾರ್ ರವರು ನನ್ನ ಸ್ನೇಹಿತೆ. ದಿ.29-03-2024 ರಂದು ಮಧ್ಯಾಹ್ನ 3 ಗಂಟೆ ಸಮಯದಲ್ಲಿ ನಾವು ದ್ವಿಚಕ್ರ ವಾಹನದಲ್ಲಿ ರಸ್ತೆಯ ಎಡಭಾಗದಲ್ಲಿ ಹೋಗುತ್ತಿದ್ದಾಗ ಟ್ರಕ್ ಬಂದು ನಮಗೆ ಡಿಕ್ಕಿಪಡಿಸಿತ್ತು. ಆ ಸಮಯದಲ್ಲಿ ನಾವು ರಸ್ತೆಯ ತುದಿಗೆ ಹೋದಾಗ ಅಲ್ಲಿ ಮರಳು ಇತ್ತು. ಅಲ್ಲಿ ಮರಳು ಇದ್ದ ಕಾರಣ ದ್ವಿಚಕ್ರವಾಹನವು ಆಯಾ ತಪ್ಪಿ ರಸ್ತೆಗೆ ಬಿದ್ದಿರುತ್ತದೆ. ಆಗ ಮೃತ ರೇಖಾ ಪರಿಹಾರ್ ರವರು ರಸ್ತೆಯ ಮೇಲೆ ಬಿದ್ದಿದ್ದರು ಮತ್ತು ಆ ಸಮಯದಲ್ಲಿ ಟ್ರಕ್ ನ ಚಾಲಕ ಟ್ರಕ್ ನ್ನು ಅವರ ಮೇಲೆ ಹರಿಸಿದರು. ನಂತರ ಟ್ರಕ್ ನ್ನು ಅಲ್ಲೆ ಬಿಟ್ಟು ಚಾಲಕ ಓಡಿ ಹೋಗಿರುತ್ತಾರೆ. ನಂತರ ನಾನು ರೇಖರವರನ್ನು ಸಮೀಪದಲ್ಲಿ ಇರುವ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ.

ನಾನು ಟ್ರಕ್ ನ ಚಾಲಕನನ್ನು ಮೇಲ್ನೋಟಕ್ಕೆ ನೋಡಿರುತ್ತೇನೆ ಮತ್ತು ಅವರನ್ನು ನೋಡಿದರೆ ನನಗೆ ಗುರುತಿಸಲು ಆಗುವುದಿಲ್ಲ. ಈಗ ಸಾಕ್ಷಿಗೆ 2 ಫೋಟೋಗಳನ್ನು ತೋರಿಸಿದ್ದು, ಅದರಲ್ಲಿ ಇರುವ ವಾಹನಗಳು ಅಪಘಾತಕ್ಕೆ ಒಳಗಾಗಿದ್ದವು. ಸದರಿ ಫೋಟೋಗಳನ್ನು ನಿಪಿ-2 ಮತ್ತು 3 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದ್ವಿಚಕ್ರ ವಾಹನ ಸಂ. ಕೆಎ-05-ಎಎನ್-0403 ನ್ನು ಬುಕ್ ಮಾಡಿಸಿ ನೀವು ಅದನ್ನು ಚಾಲನೆ ಮಾಡಿರುತ್ತೀರಾ ಮತ್ತು ನಿಮ್ಮ ಹಿಂಭಾಗದಲ್ಲಿ ರೇಖಾ ಪರಿಹಾರ್ ವನುನ ಕೂಡಿಸಿಕೊಂಡು ಹೋಗುತ್ತಿರುವಾಗ ಮಧ್ಯಾಹ್ನ 3.45 ರ ರ ಸಮಯದಲ್ಲಿ ಹಿಂದಿನಿಂದ ಟಿಪ್ಪರ್ ಲಾರಿ ಸಂ. ಕೆಎ-05-ಎಎ-6915 ನ ಚಾಲಕ ಲಾರಿಯನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಡಿಕ್ಕಿಪಡಿಸಿರುತ್ತಾರೆ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಸದರಿ ಅಪಘಾತದಿಂದ ನಿಮ್ಮ ಬಲಗಾಲು ಮತ್ತು ಬಲಗೈಗೆ ಮೂಗೇಟು ಆಗಿರುತ್ತದೆ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಸದರಿ ಅಪಘಾತಕ್ಕೆ ಸಂಬಂಧಿಸಿದಂತೆ ನೀವು ದಿ.30-03-2024 ರಂದು ನಿಮ್ಮ ಹೇಳಿಕೆಯನ್ನು ಪೋಲೀಸರಿಗೆ ನೀಡಿರುತ್ತೀರಾ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ.

**ಪಾಟೀ ಸವಾಲುಃ- ಆರೋಪಿ ಪರ ಶ್ರೀ. ಎನ್. ಕೆ, ವಕೀಲರಿಂದಃ-**

**01.** ನಿಮ್ಮ ದ್ವಿಚಕ್ರವಾಹನವು ಸ್ಕಿಡ್ ಆಗಿದ್ದರಿಂದ ಅಪಘಾತವು ಸಂಭವಿಸಿರುತ್ತದೆ ಎಂದರೆ ಸಾಕ್ಷಿಯು ಟ್ರಕ್ ಬಂದ ಕಾರಣ ತನ್ನ ದ್ವಿಚಕ್ರ ವಾಹನ

ಸ್ಕಿಡ್ ಆಗಿರುತ್ತದೆ ಎನ್ನುತ್ತಾರೆ. ನನಗೆ ಟ್ರಕ್ ನ ಸಂಖ್ಯೆ ಹೇಳಲು ಬರುವುದಿಲ್ಲ. ನಿಮ್ಮ ಅತಿವೇಗ ಮತ್ತು ಅಜಾಗರೂಕತೆಯ ಚಾಲನೆಯಿಂದ ಅಪಘಾತವು ಸಂಭವಿಸಿರುತ್ತದೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ :- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -2722/2024**
**ಚಾಸಾ - 04 / ಪ್ರಾಸಾ - 03**

| | |
|---|---|
| ಹೆಸರು | **ರಿಷವ್ ಕುಮಾರ್ ಯಾದವ್** |
| ತಂದೆಯ ಹೆಸರು | **ಮನೋಜ್ ಕುಮಾರ್** |
| ವಯಸ್ಸು | **21** |
| ಉದ್ಯೋಗ | **ಖಾಸಗಿ ಕೆಲಸ** |
| ವಿಳಾಸ | **ಬೆಂಗಳೂರು** |

**ದಿನಾಂಕಃ06-06-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಸಾಕ್ಷಿಗೆ ಕನ್ನಡ ಬಾಷೆಯು ಬರುವುದಿಲ್ಲ ಮತ್ತು ತನಗೆ ಆಂಗ್ಲ ಬಾಷೆ ಬರುತ್ತದೆ ಎಂದು ಹೇಳಿದ ಕಾರಣ ನ್ಯಾಯಾಲಯಕ್ಕೆ ಆಂಗ್ಲ ಬಾಷೆಯು ಗೊತ್ತಿರುವ ಕಾರಣದಿಂದ ಸಾಕ್ಷಿ ವಿಚಾರಣೆಯನ್ನು ಮಾನ್ಯ ಎಪಿಪಿ ಮತ್ತು ಆರೋಪಿಯ ಪರ ವಕೀಲರು ಸಮ್ಮತಿಯಿಂದ ಮಾಡಲಾಗಿರುತ್ತದೆ.**

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಮೃತ ರೇಖಾಪರಿಹಾರ್ ರವರು ನನ್ನ ಸ್ನೇಹಿತೆ. ದಿ.29-03-2024 ರಂದು ಮಧ್ಯಾಹ್ನ 3.30 ರಿಂದ 4 ಗಂಟೆ ಸಮಯದಲ್ಲಿ ನಾವು ಪ್ರವಾಸವನ್ನು ಮುಗಿಸಿಕೊಂಡು ವಾಪಸ್ಸು ಬೆಂಗಳೂರಿಗೆ ಹೋಗುವ ಸಮಯದಲ್ಲಿ ನಾವು ರಸ್ತೆಯ ಎಡಭಾಗದಲ್ಲಿ ಹೋಗುತ್ತಿದ್ದೇವು ಮತ್ತು ನಮ್ಮ ಮುಂದೆ ಚಾಸಾ-2 ಮತ್ತು ಮೃತ ರೇಖಾ ಪರಿಹಾರ್ ರವರು ದ್ವಿ ಚಕ್ರವಾಹನದಲ್ಲಿ ಹೋಗುತ್ತಿದ್ದರು. ಆ ಸಮಯದಲ್ಲಿ ದ್ವಿಚಕ್ರ ವಾಹನದಲ್ಲಿ ರಸ್ತೆಯ ಎಡಭಾಗದಲ್ಲಿ ಹೋಗುತ್ತಿದ್ದಾಗ ಟ್ರಕ್ ಬಂದು ಚಾಸಾ-1 ರವರ ವಾಹನಕ್ಕೆ ಡಿಕ್ಕಿಪಡಿಸಿತ್ತು. ಆ ಸಮಯದಲ್ಲಿ ಅವರು ರಸ್ತೆಯ ತುದಿಗೆ ಹೋದಾಗ ಅಲ್ಲಿ ಮರಳು ಇತ್ತು. ಅಲ್ಲಿ ಮರಳು ಇದ್ದ ಕಾರಣ ದ್ವಿಚಕ್ರವಾಹನವು ಆಯಾ ತಪ್ಪಿ ರಸ್ತೆಗೆ ಬಿದ್ದಿರುತ್ತದೆ. ಆಗ ಮೃತ ರೇಖಾ ಪರಿಹಾರ್ ರವರು ರಸ್ತೆಯ ಮೇಲೆ ಬಿದ್ದಿದ್ದರು ಮತ್ತು ಆ

ಸಮಯದಲ್ಲಿ ಟ್ರಕ್ ನ ಚಾಲಕ ಟ್ರಕ್ ನ್ನು ಅವರ ಮೇಲೆ ಹರಿಸಿದರು. ನಂತರ ಟ್ರಕ್ ನ್ನು ಅಲ್ಲೆ ಬಿಟ್ಟು ಚಾಲಕ ಓಡಿ ಹೋಗಿರುತ್ತಾರೆ. ನಂತರ ನಾನು ರೇಖರವರನ್ನು ಸಮೀಪದಲ್ಲಿ ಇರುವ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ. ನಾನು ಟ್ರಕ್ ನ ಚಾಲಕನನ್ನು ಮೇಲ್ನೋಟಕ್ಕೆ ನೋಡಿರುತ್ತೇನೆ ಮತ್ತು ಅವರನ್ನು ನೋಡಿದರೆ ನನಗೆ ಗುರುತಿಸಲು ಆಗುವುದಿಲ್ಲ. ಈಗ ಸಾಕ್ಷಿಗೆ ನಿಪಿ-2 ಮತ್ತು 3 ನ್ನು ತೋರಿಸಿದ್ದು, ಅದರಲ್ಲಿ ಇರುವ ವಾಹನಗಳು ಅಪಘಾತಕ್ಕೆ ಒಳಗಾಗಿದ್ದವು.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದ್ವಿಚಕ್ರ ವಾಹನ ಸಂ. ಕೆಎ-05-ಎಎನ್-0403 ನ್ನು ಬುಕ್ ಮಾಡಿಸಿ ಚಾಸಾ-1 ರವರು ಅದನ್ನು ಚಾಲನೆ ಮಾಡಿರುತ್ತೀರಾ ಮತ್ತು ಚಾಸಾ-1 ಹಿಂಭಾಗದಲ್ಲಿ ರೇಖಾ ಪರಿಹಾರ್ ನ್ನು ಕೊಡಿಸಿಕೊಂಡು ಹೋಗುತ್ತಿರುವಾಗ ಮಧ್ಯಾಹ್ನ 3.45 ರ ರ ಸಮಯದಲ್ಲಿ ಹಿಂದಿನಿಂದ ಟಿಪ್ಪರ್ ಲಾರಿ ಸಂ. ಕೆಎ-05-ಎಎ-6915 ನ ಚಾಲಕ ಲಾರಿಯನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಡಿಕ್ಕಿಪಡಿಸಿರುತ್ತಾರೆ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಸದರಿ ಅಪಘಾತದಿಂದ ನಿಮ್ಮ ಬಲಗಾಲು ಮತ್ತು ಬಲಗೈಗೆ ಮೂಗೇಟು ಆಗಿರುತ್ತದೆ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಸದರಿ ಅಪಘಾತಕ್ಕೆ ಸಂಬಂಧಿಸಿದಂತೆ ನೀವು ದಿ.15-04-2024 ರಂದು ನಿಮ್ಮ ಹೇಳಿಕೆಯನ್ನು ಪೋಲೀಸರಿಗೆ ನೀಡಿರುತ್ತೀರಾ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ.

**ಪಾಟೀ ಸವಾಲುಃ- ಆರೋಪಿ ಪರ ಶ್ರೀ. ಎನ್. ಕೆ, ವಕೀಲರಿಂದಃ-**

**01.** ನಿಮ್ಮ ದ್ವಿಚಕ್ರವಾಹನವು ಸ್ಕಿಡ್ ಆಗಿದ್ದರಿಂದ ಅಪಘಾತವು ಸಂಭವಿಸಿರುತ್ತದೆ ಎಂದರೆ ಸಾಕ್ಷಿಯು ಟ್ರಕ್ ಬಂದ ಕಾರಣ ದ್ವಿಚಕ್ರ ವಾಹನ

ಸ್ಕಿಡ್ ಆಗಿರುತ್ತದೆ ಎನ್ನುತ್ತಾರೆ. ನನಗೆ ಟ್ರಕ್ ನ ಸಂಖ್ಯೆ ಹೇಳಲು ಬರುವುದಿಲ್ಲ. ಚಾಸಾ-1 ರವರ ಅತಿವೇಗ ಮತ್ತು ಅಜಾಗರೂಕತೆಯ ಚಾಲನೆಯಿಂದ ಅಪಘಾತವು ಸಂಭವಿಸಿರುತ್ತದೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ ಃ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -2722/2024**
**ಚಾಸಾ - 03 / ಪ್ರಾಸಾ - 04**

| | |
|---|---|
| ಹೆಸರು | **ಅಶ್ವತ್** |
| ತಂದೆಯ ಹೆಸರು | **ಗೋವಿಂದರಾಜು** |
| ವಯಸ್ಸು | **21** |
| ಉದ್ಯೋಗ | **ಖಾಸಗಿ ಕೆಲಸ** |
| ವಿಳಾಸ | **ಬೆಂಗಳೂರು** |

**ದಿನಾಂಕಃ06-06-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಈಗ ಸಾಕ್ಷಿಗೆ ನಿಪಿ-1 ನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಚಾಸಾ-1 ರವರ ತಂಗಿಗೆ ಅಪಘಾತವಾಗಿರುತ್ತದೆ ಮತ್ತು ಚಾಸಾ-1 ರವರಿಗೆ ಕನ್ನಡ ಬಾಷೆಯು ಬಾರದೇ ಇದ್ದ ಕಾರಣ ನಾನು ನಿಪಿ-1 ನ್ನು ಬಾಷಾಂತರ ಮಾಡಿರುತ್ತೇನೆ. ಆಗಾಗಿ ನಾನು ನಿಪಿ-1 ಕ್ಕೆ ನನ್ನ ಸಹಿಯನ್ನು ಹಾಕಿರುತ್ತೇನೆ. ಈಗ ಸಾಕ್ಷಿಗೆ ನೋಟಿಸ್ ನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಾಕ್ಷಿಯು ಗುರುತಿಸಿರುತ್ತಾರೆ. ನೋಟಿಸ್ ನಿಪಿ-4 ಎಂದು ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಾಕ್ಷಿಯು ಗುರುತಿಸಿರುತ್ತಾರೆ. ನೋಟಿಸ್ ನಿಪಿ-5 ಎಂದು ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

ನಾನು ನಿಪಿ-4 ಮತ್ತು 5 ಕ್ಕೆ ತಾವರೆಕೆರೆ ಪೋ. ಠಾಣೆಯಲ್ಲಿ ನನ್ನ ಸಹಿಯನ್ನು ಮಾಡಿರುತ್ತೇನೆ. ನನ್ನ ಜೊತೆ ನಿಪಿ-4 ಮತ್ತು 5 ಕ್ಕೆ ಚಾಸಾ-1 ರವರು

ಸಹಿಯನ್ನು ಮಾಡಿರುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ



ಪೋಲೀಸರು ಒಂದು ದ್ವಿಚಕ್ರವಾಹನ ಮತ್ತು ಲಾರಿಯನ್ನು ವಶಪಡಿಸಿಕೊಂಡರು. ಈಗ ಸಾಕ್ಷಿಗೆ ನಿಪಿ-2 ಮತ್ತು 3 ನ್ನು ತೋರಿಸಿದ್ದು, ಅದರಲ್ಲಿ ಇರುವ ವಾಹನಗಳನ್ನು ಪೋಲೀಸರು ಪಂಚನಾಮೆ ಮಾಡುವ ಸಮಯದಲ್ಲಿ ವಶಪಡಿಸಿಕೊಂಡಿರುತ್ತಾರೆ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದಿ.29-03-2024 ರಂದು ಪಂಚನಾಮೆಗೆ ಸಹರಿಸುವಂತೆ ಹೇಳಿ ಪೋಲೀಸರು ನಿಮಗೆ, ಚಾಸಾ-2 ಮತ್ತು 5 ರವರಿಗೆ ನಿಪಿ-4 ರಂತೆ ನೋಟಿಸ್ ನ್ನು ನಿಡಿದರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಅದೇ ದಿನ ಸಂಜೆ 6.15 ರಿಂದ 7.15 ರ ಸಮಯದಲ್ಲಿ ಚಾಸಾ-2 ರವರು ತೋರಿಸಿದ ಜಾಗದಲ್ಲಿ ಪೋಲೀಸರು ನಿಪಿ-5 ರಂತೆ ಪಂಚನಾಮೆಯನ್ನು ಮಾಡಿ ನಿಮ್ಮ, ಚಾಸಾ-2 ಮತ್ತು 5 ರವರ ಸಹಿಯನ್ನು ಪಡೆದುಕೊಂಡರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಪೋಲೀಸರು ಟಿಪ್ಪರ್ ಲಾರಿ ಸಂ. ಕೆಎ-05-ಎಎ-6915 ಮತ್ತು ದ್ವಿಚಕ್ರ ವಾಹನ ಸಂ. ಕೆಎ-05-ಎಎನ್-0403 ನ್ನು ವಶಪಡಿಸಿಕೊಂಡರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಈಗ ಸಾಕ್ಷಿಗೆ 3 ಫೋಟೋಗಳನ್ನು ತೋರಿಸಿದ್ದು, ಅವುಗಳನ್ನು ಪಂಚನಾಮೆ ಮಾಡುವ ಸಮಯದಲ್ಲಿ ತೆಗೆಯಲಾಗಿದೆ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಸದರಿ ಫೋಟೋಗಳನ್ನು ನಿಪಿ-6 ರಿಂದ 8 ಎಂದು ಗುರುತಿಸಲಾಯಿತು. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಒಂದು ಕಚ್ಚಾ ನಕ್ಷೆಯನ್ನು ತಯಾರು ಮಾಡಿದ್ದರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ.

**ಪಾಟೀ ಸವಾಲುಃ- ಆರೋಪಿ ಪರ ಶ್ರೀ. ಎನ್. ಕೆ, ವಕೀಲರಿಂದಃ-**

ಚಾಸಾ-1 ರವರು ನಿಮ್ಮ ಸ್ನೇಹಿತರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ನಿಪಿ-4 ಮತ್ತು 5 ಕ್ಕೆ ನೀವು ಪೋ. ಠಾಣೆಯಲ್ಲಿ ನಿಮ್ಮ ಸಹಿಯನ್ನು ಮಾಡಿರುತ್ತೀರಾ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ನನ್ನ ಜೊತೆ ನಿಪಿ-4 ಕ್ಕೆ ಚಾಸಾ-1 ಮತ್ತು 2 ರವರು ಸಹಿಯನ್ನು ಮಾಡಿದ್ದರು. ನಿಪಿ-1 ರಂತೆ ದೂರನ್ನು ನೀಡಿದ ಮಾರನೇ ದಿನ ಪಂಚನಾಮೆಯನ್ನು ಮಾಡಲಾಗಿದೆ. ನಿಮ್ಮ ಸಮಕ್ಷಮದಲ್ಲಿ ಪೋಲೀಸರು ಯಾವುದೇ ವಾಹನಗಳನ್ನು ವಶಪಡಿಸಿಕೊಂಡಿರುವುದಿಲ್ಲ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ನಿಪಿ-5 ರಲ್ಲಿ ಇರುವ ವಿಷಯದ ಬಗ್ಗೆ ನಿಮಗೆ ಯಾವುದೇ ಮಾಹಿತಿ ಇರುವುದಿಲ್ಲ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ನಿಮಗೆ ಸದರಿ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ ಚಾಸಾ-1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ ಃ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -**
**ಚಾಸಾ - 01 / ಪ್ರಾಸಾ - 01**

| | |
|---|---|
| ಹೆಸರು | |
| ತಂದೆಯ / ಗಂಡನ ಹೆಸರು | |
| ವಯಸ್ಸು | |
| ಉದ್ಯೋಗ | **ವ್ಯವಸಾಯ** |
| ವಿಳಾಸ | |

**ದಿನಾಂಕಃ 07-03-2024 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ - ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ -**

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

**ಪಾಟೀ ಸವಾಲು - ಆರೋಪಿ ಪರ ಶ್ರೀ.** ವಕೀಲರಿಂದ ಃ-

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಮರು ವಿಚಾರಣೆ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**ಸಾಕ್ಷಿಗೆ ಕನ್ನಡ ಬಾಷೆಯು ಬಾರದೇ ಇರುವ ಕಾರಣ ವಕೀಲರಾದ ಶ್ರೀಮತಿ. ಶ್ರುತಿರವರನ್ನು ಅನುವಾದಕರಾಗಿ ನೇಮಕ ಮಾಡಲು ಮಾನ್ಯ ಎಪಿಪಿ ಮತ್ತು ಆರೋಪಿಯ ಪರ ವಕೀಲರು ಸಮ್ಮತಿಸಿರುತ್ತಾರೆ.**